# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** ದಿನಾಂಕ: 02.12.2011

ಇಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಂತರ ಶಾಲಾ ಕಾಲೇಜುಗಳ ಮಕ್ಕಳ ಮೇಳ ಮತ್ತು ಕ್ರೀಡಾಕೂಟ ಸಮಾರೋಪ ಸಮಾರಂಭವನ್ನು ಪೂಜ್ಯ ಮಹಾಪೌರರಾದ ಶ್ರೀಮತಿ ಶಾರದಮ್ಮ ರವರು ಶಿವಾಜಿನಗರದಲ್ಲಿರುವ ಪಾಲಿಕೆಯ ಕ್ರೀಡಾಂಗಣದಲ್ಲಿ ನೆರವೇರಿಸಿದರು.

ಕಾರ್ಯಕ್ರಮದ ಉದ್ಘಾಟನೆ ಮಾಡಿ ಮಾತನಾಡಿದ ಪೂಜ್ಯ ಮಹಾಪೌರರು, ಕಳೆದ ವರ್ಷ ಎಸ್.ಎಸ್.ಎಲ್.ಸಿ. ಯಲ್ಲಿ ಶೇ. 58% ಫಲಿತಾಂಶ ಹಾಗೂ ದ್ವಿತೀಯ ಪಿ.ಯು.ಸಿ. ಯಲ್ಲಿ ಶೇ. 55% ಫಲಿತಾಂಶ ಬಂದಿರುತ್ತದೆ. ಕಳೆದ ವರ್ಷಕ್ಕಿಂತಲೂ ಈ ವರ್ಷ ಫಲಿತಾಂಶ ಹೆಚ್ಚಿಗೆ ಬಂದಿರುತ್ತದೆ ಎಂದು ತಿಳಿಸುತ್ತಾ, ಪಾಲಿಕೆಯ ಶಾಲಾ ಕಾಲೇಜುಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳು, ಖಾಸಗಿ ಶಾಲೆಗಳ ವಿದ್ಯಾರ್ಥಿಗಳಿಗೆ ಸಮಾನರಾಗಿ ಎಲ್ಲಾ ರೀತಿಯಲ್ಲಿ ಉತ್ತಮ ಪ್ರತಿಭೆಯನ್ನು ತೋರಿಸುತ್ತಿರುವುದು ತುಂಬಾ ಸಂತೋಷವಾಗಿದೆ. ಮಕ್ಕಳ ಶಾರೀರಿಕ ಹಾಗೂ ಮನೋವಿಕಾಸಕ್ಕಾಗಿ ಇಂದು ಪಾಠದೊಂದಿಗೆ ಆಟವು ತುಂಬಾ ಅನಿವಾರ್ಯವಾಗಿದೆ. ಆದ್ದರಿಂದ ಇಂತಹ ಕ್ರೀಡಾಕೂಟಗಳನ್ನು ಹಮ್ಮಿಕೊಳ್ಳುವುದರ ಮೂಲಕ ಮಕ್ಕಳಲ್ಲಿ ಅಡಗಿರುವ ಸೂಪ್ತ ಪ್ರತಿಭೆಯನ್ನು ಪ್ರೋತ್ಸಾಹಿಸಿ, ಗುರುತಿಸಬಹುದಾಗಿರುತ್ತದೆ ಎಂದು ತಿಳಿಸಿದರು.

ಆಡಳಿತ ಪಕ್ಷದ ನಾಯಕರಾದ ಶ್ರೀ ಬಿ.ಆರ್. ನಂಜುಂಡಪ್ಪ ರವರು ಮಾತನಾಡಿ, ಪಾಲಿಕೆಯ ಶಾಲಾ ಕಾಲೇಜುಗಳಿಗೆ ಹೆಚ್ಚಾಗಿ ಬಡಮಕ್ಕಳು ಬರುತ್ತಾರೆ. ಆದ್ದರಿಂದ ಉನ್ನತ ಶ್ರೇಣಿಯಲ್ಲಿ ಉತ್ತೀರ್ಣರಾಗಿರುವ ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳಿಗೆ ರೂ.25,000/- ಮತ್ತು ಪಿ.ಯು.ಸಿ. ವಿದ್ಯಾರ್ಥಿಗಳಿಗೆ ರೂ.35,000/-ಗಳ ಪ್ರೋತ್ಸಾಹಧನ ನೀಡಲಾಗುತ್ತಿದೆ. ಅದೇ ರೀತಿ ಕ್ರೀಡೆಯಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಮಕ್ಕಳಿಗೂ ಕೂಡಾ ಪಾಲಿಕೆಯಿಂದ ಪ್ರೋತ್ಸಹ ನೀಡಲಾಗುತ್ತದೆ ಎಂದು ತಿಳಿಸಿದರು.

ತದನಂತರ ಮಾತನಾಡಿದ ಉಪ ಮಹಾಪೌರರಾದ ಶ್ರೀ ಎಸ್. ಹರೀಶ್ ರವರು, ನಗರದ ಬೇರೆ ಖಾಸಗಿ ಶಾಲೆಗಳಿಗೆ ಹೋಲಿಸಿದರೆ ನಮ್ಮ ಪಾಲಿಕೆಯ ಶಾಲಾ ಮಕ್ಕಳು ಯಾವುದೇ ರೀತಿಯಲ್ಲಿ ಕಡಿಮೆ ಇಲ್ಲ. ಇವರಲ್ಲಿಯೂ ಉತ್ತಮ ಪ್ರತಿಭೆ ಇದೆ. 2011ನೇ ಸಾಲಿನ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ಮಾಣಿಕ್‌ಷಾ ಪೆರೇಡ್ ಮೈದಾನದಲ್ಲಿ ಪಾಲಿಕೆಯ ವಿದ್ಯಾರ್ಥಿಗಳು ಸ್ವಾತಂತ್ರ್ಯ ವೀರ ಮುಂಡರಗಿ ಭೀಮರಾಯ ಎಂಬ ನೃತ್ಯರೂಪಕದಲ್ಲಿ ಭಾಗವಹಿಸಿ, ಮಾನ್ಯ ಮುಖ್ಯಮಂತ್ರಿಗಳಿಂದ ಪ್ರಥಮ ಬಹುಮಾನವನ್ನು ಪಡೆದಿರುತ್ತಾರೆ ಹಾಗೂ ಪಥಸಂಚಲನದಲ್ಲಿ ಬಿ.ಬಿ.ಎಂ.ಪಿ. ಪ್ರೌಢಶಾಲೆ ಜಯಮಹಲ್ ಶಾಲೆಯ ವಿದ್ಯಾರ್ಥಿಗಳು ಭಾಗವಹಿಸಿ, ದ್ವಿತೀಯ ಬಹುಮಾನವನ್ನು ಪಡೆದಿರುತ್ತಾರೆ ಎಂದು ತಮ್ಮ ಮೆಚ್ಚುಗೆಯನ್ನು ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಶಿಕ್ಷಣ ಮತ್ತು ಕ್ರೀಡಾ ಸ್ಥಾಯಿ ಸಮಿತಿಯ ಅಧ್ಯಕ್ಷರಾದ ಶ್ರೀ ಕೆ. ರಮೇಶ್ ರಾಜು, ಜಂಟಿ ಆಯುಕ್ತರು (ಪೂರ್ವ) ಶ್ರೀ ಕೆ.ಸಿ. ಶಿವಶಂಕರ್, ವಿದ್ಯಾಧಿಕಾರಿಗಳಾದ ಶ್ರೀ ಎಂ. ನಿಶ್ಚಲ ಪ್ರಕಾಶಂ ಹಾಗೂ ಮುಂತಾದವರು ಹಾಜರಿದ್ದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 02.12.2011**

ಇಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ವಿಶ್ವನಾಥ ನಾಗೇನಹಳ್ಳಿ ವಾರ್ಡ್ ನಂ.22 ವ್ಯಾಪ್ತಿಯ ದೊಡ್ಡಮ್ಮ ಬಡಾವಣೆಯಲ್ಲಿ ನೂತನವಾಗಿ ನಿರ್ಮಿಸಿರುವ ನಮ್ಮೂರ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆ ಕಟ್ಟಡದ ಉದ್ಘಾಟನೆಯನ್ನು ಪೂಜ್ಯ ಮಹಾಪೌರರಾದ ಶ್ರೀಮತಿ ಶಾರದಮ್ಮ ರವರು ನೆರವೇರಿಸಿದರು.

ಕಾರ್ಯಕ್ರಮದ ಉದ್ಘಾಟನೆಯನ್ನು ನೆರವೇರಿಸಿ ಮಾತನಾಡಿದ ಪೂಜ್ಯ ಮಹಾಪೌರರು, ದಾನಗಳಲ್ಲಿ ಶ್ರೇಷ್ಠವಾದುದು ವಿದ್ಯಾದಾನ. ಪಾಲಿಕೆ ಮತ್ತು ಸರ್ಕಾರಿ ಶಾಲೆಗಳಲ್ಲಿ ಹೆಚ್ಚಾಗಿ ಬಡಮಕ್ಕಳೇ ಅಭ್ಯಾಸ ಮಾಡುತ್ತಿದ್ದು, ಇಂತಹ ಶಾಲಾ ಮಕ್ಕಳ ಭವಿಷ್ಯಕ್ಕಾಗಿ ಖಾಸಗಿ ನಿವೇಶನದಲ್ಲಿ ಭವ್ಯ ಶಾಲಾ ಕಟ್ಟಡವನ್ನು ನಿರ್ಮಿಸಲಾಗಿದೆ. ಹಿರಿಯ ಸಮಾಜ ಸೇವಕರಾದ ದಿ॥ ಶ್ರೀಮಾನ್ ಸೀತಪ್ಪನವರು ಮುಂದಿನ ಭವಿಷ್ಯವು ಹಸಿರಾಗಿರಲೆಂದು ಭಾವಿಸಿ, ಶಾಲಾ ಕಟ್ಟಡಕ್ಕಾಗಿ ಧಾನವಾಗಿ ನೀಡಿದ ನಿವೇಶನದಲ್ಲಿ ಇಂದು ಪಾಲಿಕೆಯ ವತಿಯಿಂದ ರೂ.70.00 ಲಕ್ಷ ರೂ.ಗಳ ವೆಚ್ಚದಲ್ಲಿ ಶಾಲಾ ಕಟ್ಟಡವನ್ನು ನಿರ್ಮಿಸಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಉಪ ಮಹಾಪೌರರಾದ ಶ್ರೀ ಎಸ್. ಹರೀಶ್, ಆಡಳಿತ ಪಕ್ಷದ ನಾಯಕರಾದ ಶ್ರೀ ಬಿ.ಆರ್. ನಂಜುಂಡಪ್ಪ, ಸ್ಥಳೀಯ ಪಾಲಿಕೆ ಸದಸ್ಯರಾದ ಶ್ರೀಮತಿ ಮುನಿರತ್ನಮ್ಮ ಹಾಗೂ ಮುಂತಾದವರು ಹಾಜರಿದ್ದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**